# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 353 |
| ಸದಸ್ಯರ ಹೆಸರು | : | ಶ್ರೀ ಎಸ್.ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 10.03.2025 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರ ಜಾರಿಗೆ ತಂದಿರುವ ಬಿಸಿಯೂಟ ಯೋಜನೆಯಡಿ ಪ್ರತಿ ಮೊಟ್ಟೆಗೆ ರೂ 6/- ನಿಗದಿ ಪಡಿಸಿದ್ದು, ಮಾರುಕಟ್ಟೆಯಲ್ಲಿ ಮೊಟ್ಟೆ ದರ ಹೆಚ್ಚಿರುವುದರಿಂದ ಪ್ರತಿ ಮೊಟ್ಟೆಗೆ ಹೆಚ್ಚುವರಿ ಹಣವನ್ನು ಶಿಕ್ಷಕರೆ ಭರಿಸಬೇಕಾದ ಪರಿಸ್ಥಿತಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪೂರಕ ಪೌಷ್ಠಿಕ ಆಹಾರಗಳಾದ ಮೊಟ್ಟೆ/ ಬಾಳೆಹಣ್ಣು ವಿತರಿಸಲು ಪ್ರತಿ ವಿದ್ಯಾರ್ಥಿಗೆ ಒಂದು ದಿನಕ್ಕೆ ರೂ 6/-ಗಳ ಘಟಕ ವೆಚ್ಚವನ್ನು ನಿಗದಿಪಡಿಸಲಾಗಿದೆ. ಸರ್ಕಾರದ ನಿಗದಿಪಡಿಸಿರುವ ಘಟಕ ವೆಚ್ಚವು ಸೂಕ್ತವಾಗಿದ್ದು, ಸಗಟು ದರದಲ್ಲಿ ಮೊಟ್ಟೆ ಖರೀದಿ ಮಾಡುತ್ತಿರುವುದರಿಂದ ಸರ್ಕಾರ ನೀಡುವ ಹಣದಲ್ಲಿ ಮೊಟ್ಟೆ ಖರೀದಿಸಲು ಸಾಧ್ಯವಾಗುತ್ತಿದೆ.<br><br>ಪೂರಕ ಪೌಷ್ಠಿಕ ಆಹಾರ ವಿತರಣೆಗೆ ಪ್ರತಿ ವಿದ್ಯಾರ್ಥಿಗೆ ನಿಗದಿಪಡಿಸಿರುವ ಘಟಕ ವೆಚ್ಚದಲ್ಲಿಯೇ ಶಾಲೆಗಳಲ್ಲಿ ಪೂರಕ ಪೌಷ್ಠಿಕ ಆಹಾರ ಪದಾರ್ಥಗಳನ್ನು ಖರೀದಿಸಲಾಗುತ್ತಿರುವುದರಿಂದ ಶಿಕ್ಷಕರಿಂದ ಹೆಚ್ಚುವರಿ ಹಣವನ್ನು ಭರಿಸುವ ಪರಿಸ್ಥಿತಿ ಇರುವುದಿಲ್ಲ. |
| ಆ) | ಬಂದಿದ್ದಲ್ಲಿ, ಮಾರುಕಟ್ಟೆ ದರದಂತೆ ಮೊಟ್ಟೆಯ ದರವನ್ನು ಹೆಚ್ಚಳ ಮಾಡಿ ಬಿಸಿಯೂಟ ಯೋಜನೆಯಡಿ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಮಾಹಿತಿ ನೀಡುವುದು) | ಉದ್ಭವಿಸುವುದಿಲ್ಲ. |

ಇಪಿ 26 ಎಂಎಂಎಸ್ 2025

(ಎಸ್.ಮಧು ಬಂಗಾರಪ್ಪ)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.